ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾದ ದಿನಾಂಕ : 16.06.2025

**ಮುಖ್ಯ ವಿಚಾರಣೆ:** ಅರ್ಜಿದಾರರ ಪರ ಶ್ರೀ.ಪಿ.ಕೆ.ವಿ. ವಕೀಲರಿಂದ :

ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿರುತ್ತವೆ. ನಾನು ಅದನ್ನು ಓದಿ, ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ದಾಖಲೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನನ್ನ ಪರವಾಗಿ ನಿಶಾನೆಗಳನ್ನಾಗಿ ಗುರುತಿಸಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

1. ದೂರಿನ ದೃಢೀಕೃತ ಪ್ರತಿಯನ್ನು ನಿಪಿ 1 ಎಂದು,

2. ಕೆ.ಆರ್. ಪೇಟೆ ಗ್ರಾಮತರ ಪೊಲೀಸ್ ಠಾಣೆಯ ಕ್ರೈಂ ನಂಬರ್ 141/2022 ರ ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು ನಿಪಿ 2 ಎಂದು,

3. ಪಂಚನಾಮೆಯ ದೃಢೀಕೃತ ಪ್ರತಿಯನ್ನು ನಿಪಿ 3 ಎಂದು,

4. ಅಮಾನತ್ತು ಪಂಚನಾಮೆಯ ದೃಢೀಕೃತ ಪ್ರತಿಯನ್ನು ನಿಪಿ 4 ಎಂದು,

5. ಶವ ತನಿಖಾ ವರದಿಯ ದೃಢೀಕೃತ ಪ್ರತಿಯನ್ನು ನಿಪಿ 5 ಎಂದು,

6. ಮರಣೋತ್ತರ ಪರೀಕ್ಷಾ ವರದಿಯನ್ನು ನಿಪಿ 6 ಎಂದು,

7. ಅಪಘಾತಕ್ಕಿಡಾದ ವಾಹನ ಯಾಂತ್ರೀಕಾ ಪರೀಕ್ಷಾ ವರದಿಯ ದೃಢೀಕೃತ ಪ್ರತಿಯನ್ನು ನಿಪಿ 7 ಎಂದು,

8. ದೋಷಾರೋಪಣಾ ಪತ್ರದ ದೃಢೀಕೃತ ಪ್ರತಿಯನ್ನು ನಿಪಿ 8 ಎಂದು ಗುರುತಿಸಲಾಯಿತು.

ಮುಂದುವರಿದ ಮುಖ್ಯವಿಚಾರಣೆಗಾಗಿ ಸಮಯ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ.

(ದೇವರಾಜು ಹೆಚ್.ಆರ್.)
ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ ಕೆ.ಆರ್.ಪೇಟೆ.